P.W.1

**ಸಾಕ್ಷಿಯನ್ನು ದಿನಾಂಕಃ 07-12-2023 ರಂದು ಕರೆಯಿಸಿ ಪ್ರಮಾಣ ವಚನ ನೀಡಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ.ವಿ.ಜಿ.ಪಿ.ವಕೀಲರವರಿಂದಃ**

**ನನ್ನ ಮುಖ್ಯ ವಿಚಾರಣೆಯ ಬದಲಾಗಿ ಸಲ್ಲಿಸಿರುವ ಪ್ರಮಾಣಪತ್ರದಲ್ಲಿನ ವಿಷಯಗಳೆಲ್ಲವು ಸತ್ಯವಾಗಿರುತ್ತದೆ. ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿ ಇರುವ ಸಹಿ ನನ್ನದೇ ಇರುತ್ತದೆ. ಸದರಿ ಸಾಕ್ಷಿಯನ್ನು ಪಿ ಡಬ್ಲೂ 1 ಎಂದು ಪರಿಗಣಿಸಲಾಗಿದೆ.**

ನಾನು ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ಸರ್ವೆ ನಂ.376, ಸರ್ವೆ ನಂ.231ಎ, ಸರ್ವೆ ನಂ.475/2 ಮತ್ತು ಸರ್ವೆ ನಂ.198ಇ ನೇದ್ದವುಗಳಿಗೆ ಸಂಬಂದಿಸಿದ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ರಿಂದ 4 ಎಂದು, ಡೋರ್ ನಂ.137 ನೇದ್ದಕ್ಕೆ ಸಂಬಂದಿಸಿದ ಕರಾಕರಣೆಯಾದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ನೊಂದಾಯಿತ ಮೃತ್ಯುಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ವಾದಿಯ ಮರಣಪ್ರಮಾಣಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಸದರಿ ದಾಖಲೆಯ ಮೂಲಪ್ರತಿಯ ಬಗ್ಗೆ ಸಾಕ್ಷಿಯನ್ನು ವಿಚಾರಿಸಿದಾಗ, ಅದು ಖರೀದಿದಾರರ ಹತ್ತಿರ ಇರುತ್ತದೆ ಎಂದು ನುಡಿಯುತ್ತಾರೆ. ಆದ್ದರಿಂದ ದಾಖಲೆಯನ್ನು ಅದನ್ನು ನಿಪಿ-8 ಎಂದು, ಋಣಭಾರ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು, ಸರ್ವೆ ನಂ.475/2 ನೇದ್ದಕ್ಕೆ ಸಂಬಂದಿಸಿದ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು, ಎಂ.ಆರ್.ನಂ.ಹೆಚ್76 ನೇದ್ದನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀಸವಾಲುಃ 1 ಮತ್ತು 2 ನೇ** ಶ್ರೀ.ಎಂ.ಜಿ.ಆರ್.ವಕೀಲರು ಪಾಟೀಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

**ಪಾಟೀಸವಾಲುಃ 3 ಮತ್ತು 4 ನೇ** ಶ್ರೀ.ಎಂ.ಎಸ್.ಬಿ.ವಕೀಲರು ಪಾಟೀಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸರಿಯಿದೆ.**

**ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ. ಹರಪನಹಳ್ಳಿ**